# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರ ರಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ–164//2022–23 ದಿನಾಂಕ: 04–06–2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 04–06–2022 ಶನಿವಾರ ವಾರ್ಡ್‌ಸಂಖ್ಯೆ:164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಮೇ ತಿಂಗಳ ಮೊದಲನೇ ವಾರ್ಡ್ ಸಮಿತಿಸಭೆಯ ನಡವಳಿಗಳು.

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಸಂಜೆ 4.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ರಾಜೇಶ್ ಕೆ.ಎನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಿರಿನಗರ ಉಪವಿಭಾಗ |
| 3 | ಶ್ರೀ ಎಂ. ರಮೇಶ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್–164, ವಿದ್ಯಾಪೀಠ |
| 4 | ಶ್ರೀಮತಿ ಎಂ. ಶಾಮಲಾ ಕುಮಾರ್ | ನಿಕಟ ಪೂರ್ವ ಪಾಲಿಕೆ ಸದಸ್ಯರು |
| 5 | ಶ್ರೀ ಸುನಿಲ್ ಕುಮಾರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 6 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್–164, ವಿದ್ಯಾಪೀಠ |
| 7 | ಶ್ರೀಮತಿ ಬಿ. ಭಾಗ್ಯ | ಸಾರ್ವಜನಿಕರು |
| 8 | ಶ್ರೀ ಎಂ. ಸುರೇಶ್ | ಕಂದಾಯ ಪರಿವೀಕ್ಷರು, ವಾರ್ಡ್ ನಂ. 164 |
| 9 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 10 | ಶ್ರೀ ಕೃಷ್ಣಮೂರ್ತಿ.ಎಂ | ಕಿರಿಯ ಅಭಿಯಂತರರು, ಬೆಸ್ಕಾಂ |
| 11 | ಶ್ರೀ ಕೆ.ಎನ್.ಜಯರಾಮೇಗೌಡ | ಸ್ಯಾನಿಟರಿ ಧಫೇದಾರ್ |
| 12 | ಶ್ರೀ ಡಾ// ವಿನೀತಾ.ಜಿ | ಮೆಡಿಕಲ್ ಆಫೀಸರ್ |
| 13 | ಶ್ರೀಮತಿ ಡಾ//ಹರ್ಷಿತಾಆನಚೆಡ್ | ಕೋವಿಡ್ ಮೆಡಿಕಲ್ ಆಫೀಸರ್ |
| 14 | ಶ್ರೀಕೆ.ಮಲ್ಲಿಕಾರ್ಜುನ್ | ಮಾರ್ಷಲ್ |
| 15 | ಶ್ರೀ ಶಿವಲಿಂಗಯ್ಯ ವೈ ಎಸ್ | ಪತ್ರಕರ್ತರು |
| 16 | ಶ್ರೀ ಸುದರ್ಶನ್ ಡಿ.ಎನ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 17 | ಶ್ರೀ ಧವಳೇಶ್ ಬಿ | ಸಹಾಯಕ ಅಭಿಯಂತರರು, ಬೆಸ್ಕಾಂ |
| 18 | ಶ್ರೀ ಸುದರ್ಶನ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯು.ಎಸ್.ಎಸ್.ಬಿ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್‌ರವರು ಸಭೆಯಲ್ಲಿ ಹಾಜರಿದ್ದಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ವಾರ್ಡ್ ವ್ಯಾಪ್ತಿಯಲ್ಲಿ ತಗ್ಗು ಪ್ರದೇಶಗಳಲ್ಲಿನ ಚರಂಡಿಗಳಲ್ಲಿನ ಹೂಳು ತೆಗೆಯುವುದು ಮತ್ತು ತೋಳು ಚರಂಡಿಗಳನ್ನು ತುರ್ತಾಗಿ ಸ್ವಚ್ಚಗೊಳಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ. ಇತ್ತೀಚಿಗೆ ಬಿದ್ದ ಮಳೆಯಿಂದ ಐ.ಟಿ.ಐ ಲೇಔಟ್ ಬಡಾವಣೆಯಲ್ಲಿ ಮತ್ತು ಪಾರ್ಕ್ ರಸ್ತೆಗಳಲ್ಲಿ ಬಿದ್ದ ಮರಗಳನ್ನು ತೆರವುಗೊಳಿಸಲಾಗಿದೆ ಎಂದು ಹಾಗೂ ಚರಂಡಿಗಳ ಮೇಲೆ ಹಾಕಿರುವ ಚಪ್ಪಡಿ ಕಲ್ಲುಗಳು ಒಡೆದು ಹೋಗುತ್ತಿದ್ದು, ಅವುಗಳನ್ನು ಆಗಿಂದ್ದಾಗ್ಗೆ ಬದಲಾಯಿಸುತ್ತಿರುವುದಾಗಿ, ಅನಧಿಕೃತ ಡಬ್ರಿಸ್ ಬಿಡಿ ಕಲ್ಲುಗಳು ಮತ್ತು ರಸ್ತೆ ಬದಿ ಸ್ವಚ್ಚಗೊಳಿಸುವುದು ಇನ್ನಿತರೆ ಕೆಲಸಗಳನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಾಗಿ ಸಭೆಯಲ್ಲಿ ವಾರ್ಡ್ ಕೆಲಸ ಪರಿವೀಕ್ಷಕರು ಮಾನ್ಯ ಅಧ್ಯಕ್ಷರಿಗೆ ತಿಳಿಸಿದರು ಮಳೆಗಾಲವಾಗಿರುವುದರಿಂದ ಕೆಲಸ ಕಾರ್ಯಗಳ ಒತ್ತಡ ಹೆಚ್ಚಾಗಿದ್ದರೂ ಸಹ ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸಿ ಕೆಲಸ ನಿರ್ವಹಿಸುವಂತೆ ಅಧ್ಯಕ್ಷರು ಸೂಚಿಸಿದರು.
2. ಪೌರಕಾರ್ಮಿಕರು ಮತ್ತು ಆಟೋ ಟಿಪ್ಪರ್‌ಗಳ ಚಾಲಕರು ಮತ್ತು ನಿರ್ವಹಣೆಗಾರರು ಕಳೆದ 15 ದಿನಗಳಿಂದ ಗೈರು ಹಾಜರಾಗಿರುವವರ ವಿವರಗಳನ್ನು ಮುಂದಿನ ಸಭೆಯಲ್ಲಿ ತಿಳಿಸುವಂತೆ ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣೆ ವಿಭಾಗದ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿ ಘನತ್ಯಾಜ್ಯ ನಿರ್ವಹಣೆಯಲ್ಲಿ ಸಮಪರ್ಕವಾಗಿ ಕೆಲಸ ಕಾರ್ಯಗಳು ವಾರ್ಡ್ ಮಟ್ಟದಲ್ಲಿ ಯಾವುದೇ ಕುಂದು ಕೊರೆತೆಗಳಿಲ್ಲದಂತೆ ಹಾಗೂ ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸುವಂತೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿರುತ್ತಾರೆ.
3. ವಾರ್ಡ್ ವ್ಯಾಪ್ತಿಯಲ್ಲಿನ ಎಲ್ಲಾ ಶಾಲಾ ಮಕ್ಕಳಿಗೆ ಮೊದಲನೇ ಹಂತದ ಕೋವಿಡ್-19 ಕಾರ್ಬೋವ್ಯಾಕ್ಸಿನ್ ಲಸಿಕೆ ಹಾಕಲಾಗುತ್ತಿದೆ ಹಾಗೂ 60 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ಬೂಸ್ಟರ್‌ಡೋಸ್ ಲಸಿಕೆಯನ್ನು ಪ್ರಾಥಮಿಕ ಲಸಿಕಾ ಕೇಂದ್ರಗಳಲ್ಲಿ (ಪಿ.ಎಚ್.ಸಿ) ನೀಡಲಾಗುತ್ತಿದೆ ಮತ್ತು 60 ವರ್ಷ ಕೆಳಗಿರುವ ನಾಗರೀಕರಿಗೆ ವಾರ್ಡ್ ವ್ಯಾಪ್ತಿಯಲ್ಲಿನ ದಿಗ್ವಿಷ್ ಎಂಬ ಖಾಸಗಿ ಆಸ್ಪತ್ರೆಯಲ್ಲಿ ಹಾಕಲಾಗುತ್ತಿದೆ ಎಂಬ ಮಾಹಿತಿಯನ್ನು ಸಭೆಯಲ್ಲಿ ಎಲ್ಲರ ಗಮನಕ್ಕೆ ತರಲಾಗಿದೆ ಹಾಗೂ ಪ್ರಾಥಮಿಕ ಲಸಿಕಾ ಕೇಂದ್ರಗಳ (ಪಿ.ಎಚ್.ಸಿ) ವತಿಯಿಂದ ಗರ್ಭಿಣಿ ಮಹಿಳೆಯರಿಗೆ ಹಾಗೂ ಮಕ್ಕಳಿಗೆ ಚುಚ್ಚುಮದ್ದುಗಳನ್ನು ಹಾಕುವುದರ ಜೊತೆಗೆ ಅರ್ಹ ಗರ್ಭಿಣಿ ಫಲಾನುಭವಿಗಳನ್ನು ಗುರುತಿಸಿ ತಾಯಿ ಕಾರ್ಡ್ ನೀಡಲಾಗುತ್ತಿದೆ ಎಂದು ಮಾನ್ಯ ಅಧ್ಯಕ್ಷರಿಗೆ ಸಭೆಯಲ್ಲಿ ವೈದ್ಯಾಧಿಕಾರಿಗಳು ತಿಳಿಸಿರುತ್ತಾರೆ.
4. ವಾರ್ಡ್ ವ್ಯಾಪ್ತಿಯಲ್ಲಿ ಇರುವ ಉದ್ಯಾನವನಗಳಲ್ಲಿ ಸೊಳ್ಳೆ ನಿಯಂತ್ರಣಕ್ಕೆ ಹಾಗೂ ಒಣಗಿರುವ ಮರದ ರೆಂಬೆಕೊಂಬೆಗಳು ಮತ್ತು ಗರಿಗಳನ್ನು ಮಳೆಗಾಲವಾದ್ದರಿಂದ ತಪಾಸಣೆ ಮಾಡಿ ವಾಯು ವಿಹಾರಿಗಳಿಗೆ ಮತ್ತು ಹಿರಿಯ ನಾಗರೀಕರಿಗೆ ವ್ಯವಸ್ಥಿತ ರೀತಿಯಲ್ಲಿ ವಿಲೇವಾರಿ ಮಾಡುತ್ತಿರುವುದಾಗಿ ಹಾಗೂ ರಸ್ತೆ ಹಾಗೂ ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಸ್ಥಳಗಳಲ್ಲಿ ಔಷಧಿಯನ್ನು ಸಿಂಪಡಿಸುತ್ತಿರುವ ಬಗ್ಗೆ ಆರೋಗ್ಯ ಪರಿವೀಕ್ಷಕರು ಸಭೆಗೆ ಮಾಹಿತಿಯನ್ನು ನೀಡಿರುತ್ತಾರೆ ಮತ್ತು ಯಾವ್ಯಾವ ಸ್ಥಳಗಳಲ್ಲಿ ಔಷಧಿ

ಸಿಂಪಡಿಸುತ್ತಿರುವಿರಿ ಆ ಸ್ಥಳಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಸಲ್ಲಿಸುವಂತೆ ಆರೋಗ್ಯ ಪರಿವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

5. ಕಂದಾಯ ಇಲಾಖೆಯಿಂದ ಇಲ್ಲಿಯವರೆಗೂ ಒಟ್ಟು 500.00 ಲಕ್ಷಗಳು ಬೇಡಿಕೆಯಲ್ಲಿ 340.00 ಲಕ್ಷಗಳಷ್ಟು ಕಂದಾಯ ವಸೂಲಿ ಮಾಡಲಾಗಿದೆ ಎಂದು ಮತ್ತು ಬಾಕಿ ಇರುವ ಕಂದಾಯವನ್ನು ಮುಂದಿನ ದಿನಗಳಲ್ಲಿ ವಸೂಲಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಹಾಗೂ ಅರ್ಹ ಮತದಾರರಿಗೆ ಗುರುತಿನ ಚೀಟಿಯನ್ನು ನೀಡುವ ಕಾರ್ಯಕ್ರಮವು ಸಮರೋಪಾದಿಯಲ್ಲಿ ನಡೆಯುತ್ತಿರುವುದಾಗಿ ಮತ್ತು ಗುರುತಿನ ಚೀಟಿಯನ್ನು ವಿತರಿಸುತ್ತಿರುವುದಾಗಿ ಮತದಾರರ ಪಟ್ಟಿ ಪರಿಷ್ಕರಣೆ ಲೋಪರಹಿತವಾಗಿ ಸಿದ್ಧಪಡಿಸುತ್ತಿರುವುದಾಗಿ ಸಂಬಂಧಪಟ್ಟ ಕಂದಾಯ ಇಲಾಖೆಯ ಅಧಿಕಾರಿಗಳು ಮಾನ್ಯ ಅಧ್ಯಕ್ಷರಿಗೆ ಸಭೆಯಲ್ಲಿ ತಿಳಿಸಿದರು.

ಬಿ.ಎಂ.ಟಿ.ಸಿ ಸಂಸ್ಥೆ ವತಿಯಿಂದ ಬಾಕಿ ಇರುವ 40.00 ಲಕ್ಷಗಳ ಕಂದಾಯವನ್ನು ವಸೂಲಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಈ ಸಂಬಂಧ ಕಂದಾಯ ಇಲಾಖೆಯ ಅಧಿಕಾರಿಗಳು ಬಿ.ಎಂ.ಟಿ.ಸಿ ಸಂಸ್ಥೆ ವತಿಯಿಂದ ಬರಬೇಕಾಗಿರುವ ಬಾಕಿ ಮೊತ್ತವನ್ನು ಇಡೀ ಬೆಂಗಳೂರಿನಲ್ಲಿರುವ ಬಿ.ಎಂ.ಟಿ.ಸಿ ಆಸ್ತಿಗೆ ಸಂಬಂಧಪಟ್ಟ ಆಸ್ತಿ ತೆರಿಗೆಯನ್ನು ಕ್ರೂಢೀಕರಿಸಿ ಸರ್ಕಾರದ ವತಿಯಿಂದ ಬಾಕಿ ಮೊತ್ತವನ್ನು ಬಿಡುಗಡೆ ಮಾಡುವ ಬಗ್ಗೆ ಕ್ರಮವಹಿಸುತ್ತಿರುವುದಾಗಿ ಸಭೆಗೆ ಕಂದಾಯ ಇಲಾಖೆಯ ಅಧಿಕಾರಿಗಳು ಮಾನ್ಯ ಅಧ್ಯಕ್ಷರಿಗೆ ಸಭೆಯಲ್ಲಿ ತಿಳಿಸಿದರು.

6. ವಾರ್ಡ್ ವ್ಯಾಪ್ತಿಯಲ್ಲಿ ತಗ್ಗು ಪ್ರದೇಶಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವಂತೆ ಮತ್ತು ಚರಂಡಿ ಅಭಿವೃದ್ಧಿ ಮಾಡಲು ಪ್ರಸ್ತುತ ಇರುವ ಆಯವ್ಯಯದಲ್ಲಿ ಮೀಸಲಿಟ್ಟಿರುವ 40 ಲಕ್ಷಗಳ ಅನುದಾನದಲ್ಲಿ 20 ಲಕ್ಷಗಳಿಗೆ 2 ಕಾಮಗಾರಿಗಳನ್ನು ಕೈಗೆತ್ತಿಕೊಂಡು ಚರಂಡಿಗಳನ್ನು ಅಭಿವೃದ್ಧಿ ಪಡಿಸಬೇಕೆಂದು ಸಂಬಂಧಪಟ್ಟ ವಾರ್ಡ್ ಅಭಿಯಂತರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ. ವಿನಾಯಕನಗರ 1 ನೇ ಮುಖ್ಯರಸ್ತೆಯಲ್ಲಿ ಕಾಂಕ್ರೀಟ್ ರಸ್ತೆ ಇದ್ದು ಅದನ್ನು ಹೊಸದಾಗಿ ಕಾಂಕ್ರೀಟ್ ಮರುಹೊದಿಕೆ ಮಾಡಿ ವಾಹನ ಸವಾರರಿಗೆ ಮತ್ತು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸಂಬಂಧಪಟ್ಟ ವಾರ್ಡ್ ಅಭಿಯಂತರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು "FIX MY STREET" ನಲ್ಲಿ ಅಪ್ ಲೋಡ್ ಮಾಡಿ ಮಾನ್ಯ ಮುಖ್ಯ ಆಯುಕ್ತರ ಸೂಚನೆಯಂತೆ ಪೂರ್ಣಗೊಳಿಸಬೇಕೆಂದು ಸಂಬಂಧಪಟ್ಟ ವಾರ್ಡ್ ಅಭಿಯಂತರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

7. ವಾರ್ಡ್ ವ್ಯಾಪ್ತಿಯಲ್ಲಿ ತಗ್ಗು ಪ್ರದೇಶಗಳಲ್ಲಿನ ಮನೆಗಳ ಮಳೆನೀರು ಒಳಚರಂಡಿಗೆ ಸೇರಿಸಿದ್ದು, ಅದರಿಂದ ಮ್ಯಾನ್ ಹೋಲ್‌ಗಳು ಉಕ್ಕಿ ರಸ್ತೆಯಲ್ಲಿ ಹರಿಯುವುದರ ಬಗ್ಗೆ ಗಮನಹರಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಮಳೆನೀರನ್ನು ಒಳಚರಂಡಿಗೆ ತಪ್ಪಿಸಿ ರಸ್ತೆಬದಿಯ ಚರಂಡಿಗೆ ಸಂಪರ್ಕ ಕಲ್ಪಿಸುವಂತೆ ಮನೆ ಮಾಲೀಕರಿಗೆ ತಿಳುವಳಿಕೆ ನೀಡಲು ಹಾಗೂ ವಾಸ್ತವನ್ನು ಸಾರ್ವಜನಿಕರಿಗೆ ವಿವರಿಸಿ ಮುಂದಿನ ದಿನಗಳಲ್ಲಿ ಈ ರೀತಿಯಾಗದಂತೆ ಕ್ರಮವಹಿಸಲು ಬಿಡ್ಲ್ಯೂಎಸ್‌ಎಸ್‌ಬಿ ಅಭಿಯಂತರರಿಗೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

8. ಬೆಸ್ಕಾಂ ವತಿಯಿಂದ ಕಡಿದ ಮರಗಳ ರೆಂಬೆಕೊಂಬೆಗಳನ್ನು ಬೆಸ್ಕಾಂ ವತಿಯಿಂದಲೇ ತೆರವುಗೊಳಿಸಬೇಕೆಂದು ಹಾಗೂ ತಾವು ಈಗಾಗಲೇ ಟ್ರಾನ್ಸ್‌ಫಾರ್ಮರ್ ಇರುವ ಸ್ಥಳನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಹಾಗೂ ಸಾರ್ವಜನಿಕರಿಗೆ ಗೊತ್ತಾಗುವಂತೆ ಅಪಾಯದ ಸೂಚನಾ ಫಲಕವನ್ನು ಪ್ರದರ್ಶಿಸುವಂತೆ ಸಂಬಂಧಪಟ್ಟ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

9. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ಇದರಿಂದ ಸಾರ್ವಜನಿಕರು ಭಯಭೀತರಾಗಿದ್ದು, ಬೀದಿ ನಾಯಿಗಳು ಮೇಲಿಂದ ಮೇಲೆ ಓಡಾಡುವ ಸಾರ್ವಜನಿಕರಿಗೆ ಕಚ್ಚುವ ದೂರುಗಳು ಬರುತ್ತಿದ್ದು, ಬೀದಿ ನಾಯಿಗಳ ನಿಯಂತ್ರಣಕ್ಕೆ ಕಾನೂನು ರೀತಿಯಲ್ಲಿ ಕ್ರಮಕೈಗೊಳ್ಳುವಂತೆ Animal Husbandry ಅವರಿಗೆ ತಿಳಿಸುವಂತೆ ವಾರ್ಡ್ ಅಭಿಯಂತರರಿಗೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು. ಸಮರೋಪಾದಿಯಲ್ಲಿ

04/06/22

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಲಯ ಆಯುಕ್ತರು (ದಕ್ಷಿಣ) ರವರ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ&ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ / ಕಛೇರಿ ಪ್ರತಿ.